# ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** ಶ್ರೀ ಪ್ರಕಾಶ ಮನೋಹರ ಚವ್ಹಾಣ, ಸದಸ್ಯರು, ಮಖಣಾಪೂರ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ವಿಜಯಪುರ ಇವರ ಪತ್ರ ಸಂಖ್ಯೆ: ಜಿಪಂಆ/ಗ್ರಾಪಂ/ಸಿಬ್ಬಂದಿ-3/ಸಿಆರ್-20/2017-18/481, ದಿನಾಂಕ 07.06.2017
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್, ದಿನಾಂಕ 23.06.2017
3) ಶ್ರೀ ಪ್ರಕಾಶ ಮನೋಹರ ಚವ್ಹಾಣ, ಸದಸ್ಯರು, ಮಖಣಾಪೂರ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರು ಕಾರಣ ಕೇಳಿ ನೋಟೀಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ, ದಿನಾಂಕ 10.07.2017
4) ಇದೇ ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ, ದಿನಾಂಕ 28.08.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ, ಶ್ರೀ ಪ್ರಕಾಶ ಮನೋಹರ ಚವ್ಹಾಣ, ಸದಸ್ಯರು, ಮಖಣಾಪೂರ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರು ಮಖಣಾಪೂರ ಎಲ್.ಟಿ.ನಂ.2 ವಾಸಿ ಶ್ರೀಮತಿ ಪ್ರತಿಭಾ ಗಂಡ ಬಲರಾಮ ರಾಠೋಡ ಇವರು ಆಶ್ರಯ ಯೋಜನೆಯ ಫಲಾನುಭವಿಯಾಗಿದ್ದು ಬ್ಯಾಂಕಿನಲ್ಲಿ ಖಾತೆ ತೆರೆಯಬೇಕಾಗಿದೆ ಎಂದು ಹೇಳಿ ಇವರನ್ನು ತನ್ನ ಮೋಟಾರ್ ಸೈಕಲ್‌ನಲ್ಲಿ ಕೂಡಿಸಿಕೊಂದು ವಿಜಯಪುರಕ್ಕೆ ಬಂದು ಗ್ರಾಮೀಣ ಬ್ಯಾಂಕಿನಲ್ಲಿ ಉಳಿತಾಯ ಖಾತೆ ತೆರೆಯಿಸಿ ನಂತರ ಅವರನ್ನು ಮರಳಿ ಊರಿಗೆ ಕರೆದುಕೊಂಡು ಹೋಗುತ್ತೇನೆ ಎಂದು ಸುಳ್ಳು ಹೇಳಿ ಮೋಟಾರು ಸೈಕಲ್‌ನಲ್ಲಿ ಸೋಲಾಪುರ ರಸ್ತೆಗೆ ಇರುವ ಸೇವಾಲಾಲ ನಗರದಲ್ಲಿರುವ ತನ್ನ ಮನೆಗೆ ಕರೆದುಕೊಂಡು ಹೋಗಿ ಅವರ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿರುವುದಲ್ಲದೆ ಅವರ ಮಾನಭಂಗ ಮಾಡುವ ಬೆದರಿಕೆಯನ್ನು ಹಾಕಿರುವ ಪ್ರಕರಣದ ಸಂಬಂಧ ಪೋಲಿಸ್ ಉಪನಿರೀಕ್ಷಕರು, ವಿಜಯಪುರ ಪೋಲಿಸ್ ಠಾಣೆ ಇವರ ಎಫ್.ಐ.ಆರ್. ಸಂಖ್ಯೆ: 0046/2017, ದಿನಾಂಕ 03.03.2017 ರಲ್ಲಿ ಪ್ರಕರಣ ದಾಖಲಾಗಿರುತ್ತದೆ. ಕಾರಣ, ಸದರಿಯವರು ಸದಸ್ಯ ಸ್ಥಾನಕ್ಕೆ ಅಪಕೀರ್ತಿ ತರುವಂತಹ ದುರ್ನಡತೆ ಎಸಗಿರುವುದರಿಂದ, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43ಎ ರನ್ವಯ ಕ್ರಮ ಜರುಗಿಸಿ, ಅವರ ಸದಸ್ಯತ್ವವನ್ನು ರದ್ದುಗೊಳಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ವಿಜಯಪುರ ರವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸಿ, ಗ್ರಾಮ ಪಂಚಾಯತಿ ಸದಸ್ಯ ಸ್ಥಾನದಿಂದ ಏಕೆ ತೆಗೆದು ಹಾಕಬಾರದು ಎಂಬುದರ ಬಗ್ಗೆ 15 ದಿನಗಳೊಳಗಾಗಿ ವಿವರಣೆ ನೀಡುವಂತೆ ಸದರಿ ಆಪಾದಿತ ಗ್ರಾಮ ಪಂಚಾಯತಿ ಸದಸ್ಯರಿಗೆ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ (3) ರಲ್ಲಿ ಸದರಿ ಗ್ರಾಮ ಪಂಚಾಯತಿ ಸದಸ್ಯರು ಸರ್ಕಾರದಿಂದ ಜಾರಿಗೊಳಿಸಲಾಗಿದ್ದ ಕಾರಣ ಕೇಳಿ ನೋಟಿಸಿಗೆ ಕೆಳಗಿನಂತೆ ಉತ್ತರವನ್ನು ಸಲ್ಲಿಸಿರುತ್ತಾರೆ.

"ಶ್ರೀಮತಿ ಪ್ರತಿಭಾ ಗಂಡ ಬಲರಾಮ ರಾಠೋಡ ಇವರ ಮೇಲೆ ಯಾವುದೇ ಲೈಂಗಿಕ ಕಿರುಕುಳ ಮಾಡಿರುವುದಿಲ್ಲ, ಅವರು ನನ್ನ ಮೇಲೆ ಸುಳ್ಳು ಪಿರ್ಯಾದನ್ನು 21 ದಿವಸ ತಡವಾಗಿ ಕೊಟ್ಟಿರುತ್ತಾರೆ. ಅವರು ದಿನಾಂಕ 10.02.2017 ರಂದು ಘಟನೆ ಜರುಗಿದೆ ಅಂತ ಸುಳ್ಳು ಹೇಳಿ ದಿನಾಂಕ 03.03.2017 ರಂದು ನನ್ನ ಮೇಲೆ ಫಿರ್ಯಾದನ್ನು ದಾಖಲಿಸಿರುತ್ತಾರೆ. "ಶ್ರೀಮತಿ ಪ್ರತಿಭಾ

ಇವರು ಸಮಾಜದಲ್ಲಿ ನನ್ನ ಮಾನ ಹಾನಿ ಮಾಡಲು ಹಾಗೂ ನನ್ನ ತೇಜೋವಧೆ ಮಾಡಲು ಸುಳ್ಳು ಆಪಾದನೆ ಮಾಡಿರುತ್ತಾರೆ. ಅವಳು ನನಗೆ ಮಾನಸಿಕ ಹಿಂಸೆ ಮಾಡುತ್ತಿದ್ದಾಳೆ ನಾನು ಯಾವುದೇ ಅಪರಾಧ ಮಾಡಿರುವುದಿಲ್ಲ. ಮಖಣಾಪುರ ಗ್ರಾಮ ಪಂಚಾಯತಿಗೆ ಅವಿರೋಧವಾಗಿ ಆಯ್ಕೆ ಆಗಿರುತ್ತೇನೆ. ಪ್ರಕರಣವು ನ್ಯಾಯಾಲಯದಲ್ಲಿ ಇತ್ಯರ್ಥವಾಗಿರುವುದಿಲ್ಲ, ನನ್ನ ರಾಜಕೀಯ ಜೀವನ ಹಾಳು ಮಾಡಲು ಸದರಿಯವರು ನನ್ನ ಮೇಲೆ ಸುಳ್ಳು ಆಪಾದನೆ ಮಾಡಿದ್ದು ಅದನ್ನು ಪರಿಗಣಿಸಬಾರದೆಂದು ಮನವಿ ಮಾಡಿರುತ್ತಾರೆ."

ಮೇಲೆ ಓದಲಾದ (4) ರನ್ವಯ, ಶ್ರೀ ಪ್ರಕಾಶ ಮನೋಹರ ಚವ್ಹಾಣ, ಸದಸ್ಯರು, ಮಖಣಾಪೂರ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ಯವರ ನ್ಯಾಯಾಲಯದಲ್ಲಿ ದಿನಾಂಕ 05.09.2017 ರಂದು ವಿಚಾರಣೆ ಜರುಗಿಸಲಾಗಿದೆ. ಸದರಿ ಗ್ರಾಮ ಪಂಚಾಯತಿಯ ಪಂಚಾಯತಿ ಅಧಿಕಾರಿ, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತಿಯ ಸಹಾಯಕ ಕಾರ್ಯದರ್ಶಿಯವರು ಹಾಜರಾಗಿರುತ್ತಾರೆ. ಸದರಿ ಸದಸ್ಯರು ಶ್ರೀಮತಿ ಪ್ರತಿಭಾ ಗಂಡ ಬಲರಾಮ ರಾಠೋಡ ಅವರ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿರುವುದಲ್ಲದೆ ಅವರ ಮಾನಭಂಗ ಮಾಡುವ ಬೆದರಿಕೆಯನ್ನು ಹಾಕಿರುವ ಪ್ರಕರಣದ ಸಂಬಂಧ ಪೋಲಿಸ್ ಉಪನಿರೀಕ್ಷಕರು, ವಿಜಯಪುರ ಪೋಲಿಸ್ ಠಾಣೆ ಇವರ ಎಫ್.ಐ.ಆರ್. ಸಂಖ್ಯೆ: 0046/2017, ದಿನಾಂಕ 03.03.2017 ರಲ್ಲಿ ಪ್ರಕರಣ ದಾಖಲಾಗಿದೆ ಎಂದು ತಿಳಿಸಿರುತ್ತಾರೆ.

ಕನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43 ರ ತಿದ್ದುಪಡಿ ಅಧಿನಿಯಮ 43(ಎ)(i) ರಲ್ಲಿ (1) ಸರ್ಕಾರವು, ಗ್ರಾಮಪಂಚಾಯತ್‌ನ ಶಿಫಾರಸ್ಸಿನಂತೆ ಅಥವಾ ಅನ್ಯಥಾ ಯಾವೊಬ್ಬ ಸದಸ್ಯನನ್ನು,- (i) ಆತನು ತನ್ನ ಕರ್ತವ್ಯಗಳನ್ನು ನಿರ್ವಹಿಸುವಾಗ ದುರ್ನಡತೆಯ ಅಥವಾ ತಲೆ ತಗ್ಗಿಸುವಂಥ ನಡತೆಯ ತಪ್ಪಿತಸ್ಥನಾಗಿದ್ದಾನೆಂದು ಕಂಡು ಬಂದರೆ, ಅವನಿಗೆ ಅಹವಾಲನ್ನು ಹೇಳಿಕೊಳ್ಳಲು ಅವಕಾಶ ನೀಡಿದ ನಂತರ ಮತ್ತು ಅಗತ್ಯವೆಂದು ತಾನು ಭಾವಿಸಿದಂಥ ವಿಚಾರಣೆ ಮಾಡಿದ ನಂತರ ತೆಗೆದು ಹಾಕುವುದು ಸೂಕ್ತವೆಂದು ಭಾವಿಸಿದ್ದರೆ ಆ ಸದಸ್ಯನನ್ನು ಆತನ ಸದಸ್ಯತ್ವದಿಂದ ತೆಗೆದುಹಾಕಬಹುದು ಎಂದು ಉಲ್ಲೇಖಿಸಲಾಗಿದೆ.

ಸರ್ಕಾರವು ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳು, ಆಪಾದಿತರ ಲಿಖಿತ ಹೇಳಿಕೆಗಳನ್ನು ಪರಿಶೀಲಿಸಿ, ಸದರಿ ಸದಸ್ಯರು ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿರುವುದಲ್ಲದೆ ಅವರ ಮಾನಭಂಗ ಮಾಡುವ ಬೆದರಿಕೆಯನ್ನು ಹಾಕಿ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದುದರಿಂದ ಹಾಗೂ ಗಂಭೀರ ಆರೋಪ ಎದುರಿಸುತ್ತಿರುವ ಹಿನ್ನೆಲೆಯಲ್ಲಿ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣದ 43(ಎ) ರನ್ವಯ ಕ್ರಮ ಜರುಗಿಸಿ, ಶ್ರೀ ಪ್ರಕಾಶ ಮನೋಹರ ಚವ್ಹಾಣ, ಸದಸ್ಯರು, ಮಖಣಾಪೂರ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರನ್ನು ಸದರಿ ಗ್ರಾಮ ಪಂಚಾಯತಿಯ ಸದಸ್ಯ ಸ್ಥಾನದಿಂದ ತೆಗೆದು ಹಾಕಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 744 ಗ್ರಾಪಂಅ 2017 ಬೆಂಗಳೂರು, ದಿನಾಂಕ: 03.04.2018**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಪ್ರಕಾಶ ಮನೋಹರ ಚವ್ಹಾಣ, ಸದಸ್ಯರು, ಮಖಣಾಪೂರ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರು ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿರುವುದಲ್ಲದೆ ಅವರ ಮಾನಭಂಗ ಮಾಡುವ ಬೆದರಿಕೆಯನ್ನು ಹಾಕಿ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದುದರಿಂದ ಹಾಗೂ ಗಂಭೀರ ಆರೋಪ ಎದುರಿಸುತ್ತಿರುವ ಹಿನ್ನೆಲೆಯಲ್ಲಿ, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸಿ, ಶ್ರೀ ಪ್ರಕಾಶ ಮನೋಹರ ಚವ್ಹಾಣ, ಸದಸ್ಯರು, ಮಖಣಾಪೂರ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರನ್ನು ವಿಜಯಪುರ ತಾಲ್ಲೂಕಿನ ಮಖಣಾಪೂರ ಗ್ರಾಮ ಪಂಚಾಯತಿಯ ಸದಸ್ಯ ಸ್ಥಾನದಿಂದ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

4/4/18

**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಪ್ರತಿ:</u>

1) ಜಿಲ್ಲಾಧಿಕಾರಿಗಳು, ವಿಜಯಪುರ ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
3) ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ತಾಲ್ಲೂಕು ಪಂಚಾಯತಿ, ವಿಜಯಪುರ.
   (ಸದರಿಯವರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸ್ವೀಕೃತಿಯನ್ನು ಸರ್ಕಾರಕ್ಕೆ ಕಳುಹಿಸಲು ತಿಳಿಸಿದೆ)
4) ಶ್ರೀ ಪ್ರಕಾಶ ಮನೋಹರ ಚವ್ಹಾಣ, ಸದಸ್ಯರು, ಮಖಣಾಪೂರ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮಖಣಾಪೂರ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ.
6) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್–1), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.